ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 28/8/2020

# ಕರ್ನಾಟಕ ಶಾಸಕಾಂಗ ಪತ್ರಿಕೆಗೆ ಮರು ಚಾಲನೆ

ಉ. ವಾ. 28-8-20

ಬೆಂಗಳೂರು: ರಾಜ್ಯ ವಿಧಾನಮಂಡಲದ ಅಧಿವೇಶನದಲ್ಲಿ ಚರ್ಚೆಯಾಗುವ ಪ್ರಮುಖ ಸಂಗತಿಗಳು, ಉಭಯ ಸದನಗಳ ಸದಸ್ಯರು, ಅಧಿಕಾರಿ ಹಾಗೂ ಸಿಬ್ಬಂದಿಯ ಲೇಖನ ಪ್ರಕಟಿಸುವ 'ಕರ್ನಾಟಕ ಶಾಸಕಾಂಗ ಪತ್ರಿಕೆ'ಗೆ ಮರು ಚಾಲನೆ ನೀಡಲಾಗಿದೆ.

ವಿಧಾನಸೌಧದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು, 'ಕರ್ನಾಟಕ ಶಾಸಕಾಂಗ ಪತ್ರಿಕೆ' ಬಿಡುಗಡೆ ಮಾಡಿ, ಹಲವು ವರ್ಷಗಳಿಂದ ಸ್ಥಗಿತಗೊಂಡಿದ್ದ ಪತ್ರಿಕೆ ಇನ್ನು ಮುಂದೆ ನಿರಂತರವಾಗಿ ಪ್ರಕಟವಾಗಲಿದೆ ಎಂದರು.

ಪತ್ರಿಕೆಯಲ್ಲಿ ಅಧಿವೇಶನದಲ್ಲಿ ನಡೆದ ಮುಖ್ಯ ಸಂಗತಿಗಳು, ವಿಧಾನ ಮಂಡಲದ ಸದಸ್ಯರು ಹಾಗೂ ಅಧಿಕಾರಿ-ಸಿಬ್ಬಂದಿಯ ಅತ್ಯುತ್ತಮ ಲೇಖನಗಳನ್ನು ಪ್ರಕಟಿಸಲಾಗುವುದು. ಈ ಹಿಂದೆ ಕರ್ನಾಟಕ ವಿಧಾನ ಮಂಡಲ ಹೊರತರುತ್ತಿದ್ದ ಪತ್ರಿಕೆಯ ಪ್ರತಿ ಗ್ರಂಥಾಲಯದಲ್ಲಿ ಇತ್ತೀಚೆಗೆ ನನ್ನ ಕಣ್ಣಿಗೆ ಬಿದ್ದಿತು. ಹೀಗಾಗಿ, ಮತ್ತೆ ಚಾಲನೆ ನೀಡಿದ್ದೇನೆ. ಉತ್ತರ ಪ್ರದೇಶ ರಾಜ್ಯದ ವಿಧಾನ ಮಂಡಲ ಹೊರ ತರುತ್ತಿರುವ 'ಸಂಸದೀಯ ದೀಪಿಕಾ' ನನಗೆ ಸ್ಫೂರ್ತಿಯಾಗಿದೆ ಎಂದರು.



**ವಿಧಾನಸೌಧದಲ್ಲಿ ಗುರುವಾರ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು, 'ಕರ್ನಾಟಕ ಶಾಸಕಾಂಗ ಪತ್ರಿಕೆ' ಬಿಡುಗಡೆ ಮಾಡಿದರು.**

ಕಳೆದ ವರ್ಷ ರಾಜ್ಯದಲ್ಲಿ ಸರ್ಕಾರದ ಬದಲಾವಣೆ ಹಿನ್ನೆಲೆಯಲ್ಲಿ ಶಾಸಕರ ಕಿರು ಪರಿಚಯ ಪುಸ್ತಕ ಪ್ರಕಟಿಸಲು ಸಾಧ್ಯವಾಗಿರಲಿಲ್ಲ. ಪ್ರಸ್ತುತ ಸರ್ಕಾರ ವರ್ಷ ಪೂರೈಸಿರುವುದರಿಂದ ಈಗ ಬಿಡುಗಡೆ ಮಾಡಲಾಗಿದ್ದು, ಇದರಿಂದ ಸರ್ಕಾರಿ ನೌಕರರು ಹಾಗೂ ಸಾರ್ವಜನಿಕರಿಗೆ ತಮ್ಮ ಪ್ರತಿನಿಧಿಗಳ ಕುರಿತು ಸಂಪೂರ್ಣ ಮಾಹಿತಿ ಸಿಗಲಿದೆ. ಇದನ್ನು ಪಿಡಿಎಫ್ ಮಾದರಿಯಲ್ಲಿ ವಿಧಾನ ಮಂಡಲದ ಜಾಲತಾಣದಲ್ಲಿ ಸಹ ಅಪ್‌ಲೋಡ್ ಮಾಡಲಾಗುವುದು ಎಂದು ತಿಳಿಸಿದರು.

**ಸಂಗ್ರಹ ಯೋಗ್ಯ:** ವಿಧಾನಪರಿಷತ್ ಸಭಾಪತಿ ಕೆ.ಪ್ರತಾಪ ಚಂದ್ರ ಶೆಟ್ಟಿ ಮಾತನಾಡಿ, 'ಕರ್ನಾಟಕ ಶಾಸಕಾಂಗ ಪತ್ರಿಕೆ' ಅತ್ಯುತ್ತಮ ವಿಷಯ ಒಳಗೊಂಡ ಪತ್ರಿಕೆ. ಇದರಲ್ಲಿ ರಾಜ್ಯದ ವಿಧಾನ ಮಂಡಲದ ಉಭಯ ಸದನ, ಸಂಸತ್‌ನ ಉಭಯ ಸದನಗಳಲ್ಲಿ ನಡೆದ ಅತ್ಯುತ್ತಮ ಚರ್ಚೆ ಹಾಗೂ ಘಟನೆಗಳು ಇರಲಿದ್ದು, ಸಂಗ್ರಹ ಯೋಗ್ಯ ಎಂದರು. ವಿಧಾನಪರಿಷತ್‌ನ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮಿ, ವಿಧಾನಸಭೆಯ ಕಾರ್ಯದರ್ಶಿ ವಿಶಾಲಾಕ್ಷಿ ಮತ್ತಿತರರು ಉಪಸ್ಥಿತರಿದ್ದರು.